# ಕರ್ನಾಟಕ ವಿಧಾನ ಪರಿಷತ್ತು

<table>
<tr><td colspan="2">ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ</td><td>1660(1825)</td></tr>
<tr><td colspan="2">ಮಾನ್ಯ ಸದಸ್ಯರ ಹೆಸರು</td><td>ಶ್ರೀ ಬಿ.ಜಿ. ಪಾಟೀಲ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ)</td></tr>
<tr><td colspan="2">ಉತ್ತರಿಸುವ ಸಚಿವರು</td><td>ಉನ್ನತ ಶಿಕ್ಷಣ ಸಚಿವರು</td></tr>
<tr><td colspan="2">ಉತ್ತರಿಸಬೇಕಾದ ದಿನಾಂಕ</td><td>23.03.2026</td></tr>
<tr><td colspan="2">ಪ್ರಶ್ನೆ</td><td>ಉತ್ತರ</td></tr>
<tr><td>ಅ)</td><td>ಗುಲಬರ್ಗಾದ ವಿಶ್ವವಿದ್ಯಾಲಯವನ್ನು ಯಾವಾಗ ಪ್ರಾರಂಭಿಸಲಾಯಿತು ಹಾಗೂ ಗುಲಬರ್ಗಾ ವಿಶ್ವವಿದ್ಯಾಲಯಕ್ಕೆ ಸರ್ಕಾರದಿಂದ ವಾರ್ಷಿಕ ಸಿಗುವ ಅನುದಾನ ಎಷ್ಟು;</td><td>ಗುಲಬರ್ಗಾ ವಿಶ್ವವಿದ್ಯಾಲಯವನ್ನು ದಿನಾಂಕ:10.09.1980 ರಂದು ಪ್ರಾರಂಭಿಸಲಾಗಿರುತ್ತದೆ.<br><br>2025-26ನೇ ಸಾಲಿನ ಆರ್ಥಿಕ ವರ್ಷದಲ್ಲಿ ವಿಶ್ವವಿದ್ಯಾಲಯಕ್ಕೆ ಈ ಕೆಳಕಂಡಂತೆ ಅನುದಾನ ಬಿಡುಗಡೆಗೊಳಿಸಲಾಗಿದೆ;<br><br>(ರೂ.ಕೋಟಿಗಳಲ್ಲಿ)
<table>
<tr><th>ವರ್ಷ</th><th>ವೇತನ</th><th>ಪಿಂಚಣಿ</th></tr>
<tr><td>2025-26</td><td>35.39</td><td>31.50</td></tr>
</table>
</td></tr>
<tr><td>ಆ)</td><td>ಸದರಿ ವಿಶ್ವವಿದ್ಯಾಲಯದಲ್ಲಿ ಎಷ್ಟು ವಿಭಾಗಗಳಿವೆ; ಇವುಗಳಲ್ಲಿ ಎಷ್ಟು ವಿಭಾಗಗಳಲ್ಲಿ ಖಾಯಂ ಬೋಧಕ, ಬೋದಕೇತರ ಸಿಬ್ಬಂದಿಗಳಿದ್ದಾರೆ ಹಾಗೂ ನಿವೃತ್ತಿ ವೇತನ ನೀಡಲು ಸಹ ಹಣ ಇಲ್ಲದೆ ವಿಶ್ವವಿದ್ಯಾಲಯ ಪರಿತಪಿಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ, ಸರ್ಕಾರ ಕೈಗೊಂಡ ಕ್ರಮಗಳೇನು; (ವಿವರ ನೀಡುವುದು)</td><td>ಗುಲಬರ್ಗಾ ವಿಶ್ವವಿದ್ಯಾಲಯದಲ್ಲಿ ಒಟ್ಟು 33 ಅಧ್ಯಯನ ವಿಭಾಗಗಳು ಕಾರ್ಯನಿರ್ವಹಿಸುತ್ತಿವೆ.<br><br>ಖಾಯಂ ಬೋಧಕರು ಕಾರ್ಯನಿರ್ವಹಿಸುತ್ತಿರುವ ವಿಭಾಗಗಳ ಸಂಖ್ಯೆ: 20 .<br><br>ಖಾಯಂ ಸಿಬ್ಬಂದಿಗಳು ಇಲ್ಲದ ವಿಭಾಗಗಳಲ್ಲಿ ಅತಿಥಿ ಉಪನ್ಯಾಸಕರ ಸೇವೆಯನ್ನು ಪಡೆದು ವಿಭಾಗಗಳನ್ನು ನಡೆಸಲಾಗುತ್ತಿದೆ.<br><br>ಮುಂದುವರೆದು, ವಿಶ್ವವಿದ್ಯಾಲಯದಲ್ಲಿ ಒಟ್ಟು 147 ಖಾಯಂ ಬೋಧಕೇತರ ಸಿಬ್ಬಂದಿಗಳು ವಿವಿಧ ವಿಭಾಗಗಳಲ್ಲಿ ಕಾರ್ಯನಿರ್ವಹಿಸುತ್ತಿದ್ದಾರೆ.<br><br>ಗುಲಬರ್ಗಾ ವಿಶ್ವವಿದ್ಯಾಲಯಕ್ಕೆ 2025-26ನೇ ಸಾಲಿಗೆ ಪಿಂಚಣಿಗೆ ಹೆಚ್ಚುವರಿ ಅನುದಾನ ಕೋರಿ ಪ್ರಸ್ತಾವನೆ ಸ್ವೀಕೃತವಾಗಿದೆ.<br><br>2025-26ನೇ ಸಾಲಿನ ಆರ್ಥಿಕ ವರ್ಷದಲ್ಲಿ ರೂ.16.50ಕೋಟಿ ಅನುದಾನವನ್ನು ಪಿಂಚಣಿ ವೆಚ್ಚಕ್ಕಾಗಿ ಹಂಚಿಕೆ ಮಾಡಿ ಹಣ ಬಿಡುಗಡೆ ಮಾಡಲಾಗಿರುತ್ತದೆ. ನಂತರ, ವಿಶ್ವವಿದ್ಯಾಲಯದ ಹೆಚ್ಚುವರಿ ಪಿಂಚಣಿ ಕೋರಿಕೆಯನ್ವಯ, ಮತ್ತೆ ರೂ.15.00 ಕೋಟಿಗಳನ್ನು ಹೆಚ್ಚುವರಿ ಅನುದಾನ ಬಿಡುಗಡೆಗೊಳಿಸಲಾಗಿರುತ್ತದೆ.</td></tr>
</table>

| | | |
|---|---|---|
| ಇ) | ಕೆಕೆಆರ್‌ಡಿಬಿಯಿಂದ ಅಕ್ಷರ ಅವಿಷ್ಕಾರ ಯೋಜನೆಯಡಿ ಅನುದಾನಕ್ಕಾಗಿ ವಿವಿ ಸರ್ಕಾರಕ್ಕೆ ಪ್ರಸ್ತಾವನೆ ಸಲ್ಲಿಸಿದೆಯೇ; ಸಲ್ಲಿಸಿದ್ದಲ್ಲಿ, ಎಷ್ಟು ಅನುದಾನದ ಬೇಡಿಕೆಯಿಟ್ಟಿದೆ; ಯಾವಾಗ ಅನುದಾನ ಬಿಡುಗಡೆ ಮಾಡಲು ಕ್ರಮ ಕೈಗೊಳ್ಳಲಾಗುವುದು? | ಗುಲಬರ್ಗಾ ವಿಶ್ವವಿದ್ಯಾಲಯವು, 2025-26ನೇ ಸಾಲಿನ ಕಲ್ಯಾಣ ಕರ್ನಾಟಕ ಪ್ರದೇಶಾಭಿವೃದ್ಧಿ ಮಂಡಳಿಯ ಮೈಕ್ರೊ ಅಕ್ಷರ ಅವಿಷ್ಕಾರ ಯೋಜನೆಯಡಿ ಅನುದಾನ ಕೋರಿ ಸರ್ಕಾರಕ್ಕೆ ಪ್ರಸ್ತಾವನೆ ಸಲ್ಲಿಸಿರುವುದಿಲ್ಲ. |

**ಸಂಖ್ಯೆ**: ಇಡಿ 87 ಯುಜಿವಿ 2026

(ಡಾ: ಎಂ.ಸಿ. ಸುಧಾಕರ್)
ಉನ್ನತ ಶಿಕ್ಷಣ ಸಚಿವರು